ಕರ್ನಾಟಕ ಸರ್ಕಾರ

(ವಾಣಿಜ್ಯ ತೆರಿಗೆಗಳ ಇಲಾಖೆ)

TNV.353/18-19

ಸಂಖ್ಯೆ:ವಾತೆಜಂಆ(ಕಿ.ಕಾ)/ಸಿಆರ್-16/18-19

ವಾಣಿಜ್ಯ ತೆರಿಗೆ ಜಂಟಿ ಆಯುಕ್ತರವರ ಕಚೇರಿ,
ಕಿರಿಯ ಕಾಯ್ದೆಗಳ ವಿಭಾಗ, 3ನೇ ಮಹಡಿ,
ಬಿ.ಎಂ.ಟಿ.ಸಿ. ಕಟ್ಟಡ, ಯಶವಂತಪುರ,
ಬೆಂಗಳೂರು-22, ದಿನಾಂಕ:15-09-2018.

## ಸಾಮಾನ್ಯ ಟೆಂಡರ್ ಪ್ರಕಟಣೆ

ವಿಷಯ:- ವಾಣಿಜ್ಯ ತೆರಿಗೆ ಇಲಾಖೆಯಲ್ಲಿನ ಈ ವಿಭಾಗದ ವಿವಿಧ ಕಛೇರಿಗಳಿಗೆ ಸಾಮಾನ್ಯ ಟೆಂಡರ್ ಪ್ರಕ್ರಿಯೆ ಮುಖೇನ ಖಾಸಗಿ ವಾಹನಗಳನ್ನು ಬಾಡಿಗೆಗೆ ಪಡೆದುಕೊಳ್ಳುವ ಬಗ್ಗೆ.

ಉಲ್ಲೇಖ:-1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 96 ಶಿವಾನೀ 2012, ಬೆಂಗಳೂರು. ದಿನಾಂಕ: 23-08-2012.

2. ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರು(ಕ), ಬೆಂಗಳೂರು ಇವರ ಪತ್ರ ಸಂಖ್ಯೆ: ವಿಹೆಚ್‌ಟಿ/ಸಿಆರ್-07/2018-19, ದಿನಾಂಕ:14-08-2018 ಮತ್ತು ದಿನಾಂಕ:07-09-2018.
3. ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರು(ಕ), ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ವಿಹೆಚ್‌ಟಿ/ಸಿಆರ್-20/2013-14, ದಿನಾಂಕ:30-09-2014.
4. ಮಾನ್ಯ ವಾಣಿಜ್ಯ ತೆರಿಗೆ ಆಯುಕ್ತರು(ಕ), ಬೆಂಗಳೂರು ಇವರ ಪತ್ರ ಸಂಖ್ಯೆ: ವಿಹೆಚ್‌ಟಿ/ಸಿಆರ್-11/2017-18, ದಿನಾಂಕ:04-07-2017 ಮತ್ತು ದಿನಾಂಕ:03-08-2017.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಈ ವಿಭಾಗದಲ್ಲಿ ತೆರಿಗೆ ಸಂಗ್ರಹಣೆ ಕಾರ್ಯ ಮತ್ತು ಲೆಕ್ಕ ಪರಿಶೋಧನೆ ಕೆಲಸ ಕಾರ್ಯಗಳನ್ನು ನಿರ್ವಹಿಸುವ ಅಧಿಕಾರಿಗಳ ಉಪಯೋಗಕ್ಕಾಗಿ ಬಾಡಿಗೆ ವಾಹನಗಳನ್ನು ಉಲ್ಲೇಖ (2)ರಂತೆ ಗರಿಷ್ಠ ರೂ.25,000-00ಗಳ ಮಾಸಿಕ ಬಾಡಿಗೆ ದರದ ಗುತ್ತಿಗೆಯ ಆಧಾರದ ಮೇಲೆ ಪಡೆಯಲು ಮಾನ್ಯ ವಾಣಿಜ್ಯ ತೆರಿಗೆಯ ಆಯುಕ್ತರವರಿಂದ ನಿರ್ದೇಶಿಸಲಾಗಿದೆ. ಆದ್ದರಿಂದ ಅರ್ಹತೆಯುಳ್ಳ ವಾಹನದ ಮಾಲೀಕರೇ ಚಾಲಕರಾಗಿರುವ ವ್ಯಕ್ತಿಗಳು ಮತ್ತು ಟ್ರಾವೆಲ್ ಏಜೆನ್ಸಿಯವರು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ. ಈ ಕೆಳಕಂಡ ನಿಬಂಧನೆ ಮತ್ತು ಷರತ್ತುಗಳಿಗೆ ಒಳಪಟ್ಟು ವಾಹನವನ್ನು ಒದಗಿಸಲು ಮೊಹರಾದ ಲಕೋಟೆಯಲ್ಲಿ ಸಲ್ಲಿಸಬಹುದಾಗಿರುತ್ತದೆ. ಆಸಕ್ತ ಒಬ್ಬ ವಾಹನದ/ಚಾಲಕರು ಒಂದು ವಾಹನದ ಸೇವೆಗೆ ಮಾತ್ರ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಸರ್ಕಾರದ ಆದೇಶದಲ್ಲಿ ತಿಳಿಸಿರುವ ನಿಯಮಗಳನ್ವಯ 2014 ಮತ್ತು ನಂತರದ ಮಾದರಿಯ ಹಳದಿ ಬೋರ್ಡ್ ಹೊಂದಿರುವ ವಾಹನಗಳ ಸೇವೆಯನ್ನು ಮಾತ್ರ ಪಡೆಯಲಾಗುವುದು.

1. ಮೊಹರಾಧ ಲಕೋಟೆಯಲ್ಲಿ ಟೆಂಡರ್‌ನ್ನು ಸಲ್ಲಿಸಲು ಕೊನೆಯ ದಿನಾಂಕ:24-09-2018, ಸಮಯ: 4 ಘಂಟೆಯವರೆಗೆ.
2. ಟೆಂಡರ್‌ನ್ನು ತೆರೆಯುವ ದಿನಾಂಕ:25-09-2017, ಸಂಜೆ: 5 ಘಂಟೆ.
3. ಟೆಂಡರ್‌ನ ಅವಧಿ 15-09-2018 ರಿಂದ 24-09-2018.
4. 10 ಖಾಸಗಿ ವಾಹನಗಳನ್ನು ಸರ್ಕಾರಿ ಸೇವೆಗೆ ಹೊರಗುತ್ತಿಗೆ ಆಧಾರದ ಮೇರೆಗೆ ಪಡೆಯಲಾಗುವುದು.

2) ವಾಹನದ ಪರವಾನಗಿಯ ದಿನಾಂಕ:01-10-2018 ರಿಂದ 30-09-2019ರವರೆಗೆ ಚಾಲ್ತಿಯಲ್ಲಿ ಇರತಕ್ಕದ್ದು. ವಾಹನದ ಮಾದರಿಯು 2014 ಮತ್ತು ನಂತರದ ವರ್ಷದ ಮಾದರಿಗಳು ಅರ್ಹವಾಗಿರುತ್ತದೆ. ಉತ್ತಮ ಸ್ಥಿತಿಯ ಮತ್ತು ಇತ್ತೀಚಿನ ಮಾದರಿಯ ವಾಹನಗಳಿಗೆ ಆದ್ಯತೆ ನೀಡಲಾಗುವುದು.

3) ಈ ವಿಭಾಗದ ಮುಖ್ಯಸ್ಥರು ಕಛೇರಿಯ ಕೆಲಸ ಕಾರ್ಯಗಳಿಗೆ ಅನುಗುಣವಾಗಿ ತಕ್ಷಣಕ್ಕೆ ಲಭ್ಯವಿರುವ ವಾಹನವನ್ನು ಬಾಡಿಗೆಯ ಮೇಲೆ ತೆಗೆದುಕೊಳ್ಳುವ ಸಂದರ್ಭದಲ್ಲಿ ವಾಹನದ ಗುಣಮಟ್ಟವನ್ನು ಮತ್ತು ಚಾಲನಾ ಕೌಶಲ್ಯವನ್ನು ಪರೀಕ್ಷೆಗೆ ಒಳಪಡಿಸಲಾಗುವುದು. ಯಾವುದೇ ಕಾರಣ ನೀಡದೆ ವಾಹನವನ್ನು ಬದಲಿಸುವ ಅಥವಾ ನಿರಾಕರಿಸುವ ಹಕ್ಕು ಜಂಟಿ ಆಯುಕ್ತರಿಗೆ ಇರುತ್ತದೆ.

4) ವಾಣಿಜ್ಯ ತೆರಿಗೆ ಇಲಾಖೆಯು ಅಗತ್ಯವಿರುವ ವಾಹನಗಳನ್ನು ಇ-ಸಂಗ್ರಹಣೆ ಮುಖಾಂತರ ಬಾಡಿಗೆಗೆ ಪಡೆದುಕೊಳ್ಳಲು ಈ ಮೇಲೆ ಪ್ರಸ್ತಾಪಿಸಿರುವಂತೆ ಉಂಟಾಗುವ ತಾಂತ್ರಿಕ ಅಡಚಣೆಗಳ ಕಾರಣದಿಂದ ಇ-ಸಂಗ್ರಹಣೆಗೆ ಪರ್ಯಾಯವಾಗಿ ಸಾಮಾನ್ಯ ಟೆಂಡರ್ ಪ್ರಕ್ರಿಯೆಯ ಮುಖೇನ ವಾಹನಗಳ ಸೇವೆಯನ್ನು ಪಡೆದುಕೊಳ್ಳಲು ಸಾಧ್ಯವಾಗುವಂತೆ ಕೆ.ಟಿ.ಪಿ.ಪಿ ಅಧಿನಿಯಮ 4(ಜಿ)ಗೆ ಆದೇಶ ಸಂಖ್ಯೆ:ಆಇ406 ವೆಚ್ಚ-12/2014, ದಿನಾಂಕ: 16-05-2014ರಲ್ಲಿ ಸರ್ಕಾರವು ವಿನಾಯಿತಿಯನ್ನು ನೀಡಿರುತ್ತದೆ.

5) ಈ ವಿಭಾಗದ ಮುಖ್ಯಸ್ಥರಾದ ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು, ಕಿರಿಯ ಕಾಯ್ದೆಗಳು ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆಯ ಅಧಿನಿಯಮ 1999ರ ಅನ್ವಯ ಟೆಂಡರ್ ಕರೆಯುವ ಮತ್ತು ಅಂಗೀಕರಿಸುವ ಅಧಿಕಾರ ಹೊಂದಿರುತ್ತಾರೆ. (Tender Inviting and Other accepting Authority).

6) ಸಾಂಪ್ರದಾಯಿಕ ಟೆಂಡರ್ ಪ್ರಕ್ರಿಯೆಗೆ ಅನುಗುಣವಾಗಿ ಜನಪ್ರಿಯ ದಿನಪತ್ರಿಕೆಯೊಂದರಲ್ಲಿ, ಅಂದರೆ ವಿಜಯ ಕರ್ನಾಟಕ ಹಾಗೂ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

7) ದಿನಾಂಕ:01-10-2018 ರಿಂದ ಅನ್ವಯವಾಗುವಂತೆ ಸತತವಾಗಿ 5 ವರ್ಷಗಳಿಂದ ಇಲಾಖೆಯ ಒಂದೇ ವಿಭಾಗದಲ್ಲಿ ಸೇವೆ ಸಲ್ಲಿಸಿರುವ ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಸೇವೆಯನ್ನು ಅದೇ ವಿಭಾಗದಲ್ಲಿ ಪಡೆಯುವಂತಿಲ್ಲ. ಇಂತಹ ಮಾಲೀಕರೇ ಚಾಲಕರಾಗಿರುವವರು ಬೇರೆ ವಿಭಾಗಗಳಲ್ಲಿ ಅರ್ಜಿ ಸಲ್ಲಿಸಬಹುದು.

8) <u>ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು/ವಿವರಗಳು.</u>

1. ಅರ್ಜಿದಾರರ ಹೆಸರು, ವಿಳಾಸ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು-2
2. ವಿಳಾಸದ ದಾಖಲೆ (ಮತದಾರರ ಗುರುತಿನ ಚೀಟಿ/ ರೇಷನ್‌ಕಾರ್ಡ್/ ಆಧಾರ್ ಕಾರ್ಡ್/ ಪಾಸ್‌ಪೋರ್ಟ್ ಅಥವಾ ಇತರೆ ಭಾವಚಿತ್ರ ಹೊಂದಿರುವ ಗುರುತಿನ ಚೀಟಿ).
3. ಪ್ಯಾನ್‌ಕಾರ್ಡ್ ಪ್ರತಿ
4. ವಾಹನದ ನೋಂದಣಿ ಪುಸ್ತಕದ ಪ್ರತಿ.
5. ವಾಹನದ ವಿಮಾ ಪಾಲಿಸಿಯ ಪ್ರತಿ.
6. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನ ಚಾಲನಾ ಪರವಾನಗಿ ಪ್ರತಿ.
7. ರೋಡ್ ಟ್ಯಾಕ್ಸ್ ಪಾವತಿಸಿರುವ ವಿವರ.

8. ಮೇಲ್ಕಂಡ ವಿವರಗಳು ಹಾಗೂ ಎಲ್ಲಾ ದಾಖಲಾತಿಗಳ ಪ್ರತಿಯನ್ನು ಸೀಲು ಮಾಡಿದ ಲಕೋಟೆಯಲ್ಲಿಟ್ಟು ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ **ಖಾಸಗಿ ವಾಹನ ಮಾಲೀಕರ/– – ಚಾಲಕರ ಹೊರಗುತ್ತಿಗೆ ಸೇವೆ– ಸಲ್ಲಿಸಲು ಅರ್ಜಿ** ಎಂದು ನಮೂದಿಸುವುದು.
9. ಅಪೂರ್ಣ ವಿವರಗಳು ಹಾಗೂ ಮೇಲ್ಕಂಡ ದಾಖಲಾತಿಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
10. ಯಾವುದೇ ಕಾರಣವನ್ನು ನೀಡದೆ ಅರ್ಜಿಯನ್ನು ತಿರಸ್ಕರಿಸುವ ಹಕ್ಕನ್ನು ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು, ಕಿರಿಯ ಕಾಯ್ದೆಗಳು ಬೆಂಗಳೂರು ಇವರಿಗೆ ಕಾಯ್ದಿರಿಸಲಾಗಿದೆ.

9) ಅರ್ಜಿಗಳನ್ನು ವಾಣಿಜ್ಯ ತೆರಿಗೆ ಜಂಟಿ ಆಯುಕ್ತರು, ಕಿರಿಯ ಕಾಯ್ದೆಗಳು ಬೆಂಗಳೂರು ಇವರ ಕಛೇರಿಯಲ್ಲಿ ಸಲ್ಲಿಸುವುದು. ಹಾಗೂ ಅರ್ಜಿಗಳ ಸ್ವೀಕೃತಿ ಅನುಸಾರವಾಗಿ ಕ್ರಮಸಂಖ್ಯೆಯನ್ನು ನೀಡಲಾಗುವುದು.

**ದರಪಟ್ಟಿ ವಿವರ ಪ್ರತಿ ತಿಂಗಳು:**
**ಮೊದಲ 2,400 ಕಿ.ಮೀ ಗರಿಷ್ಠ ರೂ.25,000–00 (ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)**
**ನಂತರದ ಪ್ರತಿ ಕಿ.ಮೀ ರೂ.5.50–00 (ಐದು ರೂಪಾಯಿ ಐವತ್ತು ಪೈಸೆಗಳು ಮಾತ್ರ)**
**(ವಿಶೇಷ ಸಂದರ್ಭಗಳಲ್ಲಿ ಮಾತ್ರ) 300 ಘಂಟೆಯ ನಂತರ ಪ್ರತಿ ಘಂಟೆಗೆ ರೂ.40–00 (ನಲವತ್ತು ರೂಪಾಯಿಗಳು ಮಾತ್ರ)**

10) ಆಯ್ಕೆಯಾದ ವಾಹನಗಳ ಚಾಲಕರುಗಳು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತಾರೆ.

1. ಅನಾರೋಗ್ಯವು ಸೇರಿದಂತೆ ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಒಂದು ತಿಂಗಳಿನಲ್ಲಿ ಎರಡು ದಿನ ಮಾತ್ರ ವಾಹನ ಉಪಯೋಗಿಸುವ ಕಛೇರಿಯ ಅಧಿಕಾರಿಯವರಿಂದ ಅನುಮತಿ ಪಡೆದು, ಮಾಲೀಕ/ಚಾಲಕರು ರಜೆ ಪಡೆಯಬಹುದು. **ಆ ಅವಧಿಯಲ್ಲಿ ಬದಲಿ ವಾಹನದ ವ್ಯವಸ್ಥೆ ಕಡ್ಡಾಯವಾಗಿ ಮಾಡಲೇಬೇಕು.** ಇಲ್ಲದಿದ್ದಲ್ಲಿ ಗೈರು ಹಾಜರಿ ದಿವಸದ ಬಾಡಿಗೆ ಕಡಿತಗೊಳಿಸಲಾಗುವುದು.

2. ಮಾಸಿಕ ಬಾಡಿಗೆ ಹೊರಗುತ್ತಿಗೆ ಆಧಾರದ ಮೇಲೆ ಹಾಗೂ ಕರಾರಿನಂತೆ ದರಗಳಿಗೆ ಒಳಪಟ್ಟು ಮಾತ್ರ ವಾಹನಗಳನ್ನು ಬಾಡಿಗೆಗೆ ಪಡೆಯಲಾಗುವುದು.

3. ಮಾಲೀಕರೇ ಚಾಲಕರಾಗಿರುವವರು ಕಟ್ಟುನಿಟ್ಟಾಗಿ ಸಮಯಪಾಲನೆ ಮಾಡತಕ್ಕದ್ದು. ವಾಹನ ಉಪಯೋಗಿಸುವ ಕಛೇರಿಯ ಅಧಿಕಾರಿಯಿಂದ ಈ ಕುರಿತು ದೂರುಗಳು ಬಂದಲ್ಲಿ ಅಂತಹ ವಾಹನದ ಬಳಕೆಯನ್ನು ನಿಲ್ಲಿಸುವ, ಒಪ್ಪಂದವನ್ನು ರದ್ದುಪಡಿಸುವ ಅಧಿಕಾರ ವಾಣಿಜ್ಯ ತೆರಿಗೆ ಜಂಟಿ ಆಯುಕ್ತರವರದ್ದಾಗಿರುತ್ತದೆ.

4. ಇಲಾಖೆಯ ಈ ವಿಭಾಗದ ಪ್ರತಿ ಕಛೇರಿಯಲ್ಲಿ ಉಪಯೋಗಿಸಿರುವ ಪ್ರತಿ ವಾಹನಕ್ಕೆ ಸಂಬಂಧಿಸಿದಂತೆ ನಿಗದಿತ ಲಾಗ್ ಪುಸ್ತಕವನ್ನು ನಿರ್ವಹಿಸಿ ಪ್ರತಿ ದಿನದ ಆರಂಭ ಮತ್ತು ಅಂತ್ಯದವರೆಗಿನ ವಾಹನ ಓಡಾಟದ ಸಂಬಂಧ ಈ ಪುಸ್ತಕದಲ್ಲಿ ಅಗತ್ಯ ದಾಖಲೆಗಳನ್ನು ನಮೂದಿಸಿ ವಾಹನವನ್ನು ಉಪಯೋಗಿಸಿದ ಅಧಿಕಾರಿಯವರಿಂದ ರುಜು ಪಡೆಯತಕ್ಕದ್ದು.

5. ಈ ವಿಭಾಗದ ಪ್ರತಿ ಕಛೇರಿಯಲ್ಲಿ ಉಪಯೋಗಿಸುವ ವಾಹನ ಓಡಾಟಕ್ಕೆ ಸಂಬಂಧಿಸಿದಂತೆ ಆಯಾ ದಿನದ ಆರಂಭಿಕ ಮತ್ತು ಅಂತಿಮ ಸಮಯದ ಗಣನೆ ಮತ್ತು ಕಿ.ಮೀಟರ್‌ನ ಗಣನೆಯು ಆಯಾ ಕಛೇರಿಯ ಆವರಣದಿಂದ ಕಛೇರಿ ಕಾರ್ಯ ನಿಮಿತ್ತ ಆ ವಾಹನ ಹೊರಡುವ ಕ್ಷಣದಿಂದ ಪ್ರಾರಂಭವಾಗುತ್ತದೆ ಹಾಗೂ ಆ ದಿನದ ಕಾರ್ಯ ಮುಗಿದ ಮೇಲೆ ಅದೇ ಸ್ಥಳದಲ್ಲಿ ಕೊನೆಗೊಳ್ಳುತ್ತದೆ.